## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಮುಖ್ಯ ಮಂತ್ರಿ ಗ್ರಾಮೀಣ ರಸ್ತೆ ಅಭಿವೃದ್ಧಿ ಯೋಜನೆ ಲೆಕ್ಕ ಶೀರ್ಷಿಕೆ-3054-80-196-1-03-300(ಯೋಜನೆ) ಅಡಿ ಕೋಲಾರ ಜಿಲ್ಲೆ ಬಂಗಾರಪೇಟೆ ತಾಲ್ಲೂಕಿನ ವ್ಯಾಪ್ತಿಯ ರಸ್ತೆ ಅಭಿವೃದ್ಧಿ ಕಾಮಗಾರಿಗಳಿಗೆ ಅನುದಾನ ಹಂಚಿಕೆ ಮಾಡುವ ಕುರಿತು.

ಓದಲಾಗಿದೆ:
1. ಆರ್ಥಿಕ ಇಲಾಖೆಯ ಅನಧಿಕೃತ ಟಿಪ್ಪಣಿ ಸಂಖ್ಯೆ:ಆಇ/518/ ವೆಚ್ಚ-6/2015 ದಿನಾಂಕ:1-10-2016
2. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಅನುಮೋದಿಸಿದಂತೆ.

ಪ್ರಸ್ತಾವನೆ:

ಕೋಲಾರ ಜಿಲ್ಲೆ ಬಂಗಾರಪೇಟೆ ತಾಲ್ಲೂಕಿನ ವ್ಯಾಪ್ತಿಯ ರಸ್ತೆ ಅಭಿವೃದ್ಧಿ ಕಾಮಗಾರಿಗಳನ್ನು ತುರ್ತಾಗಿ ಕೈಗೊಳ್ಳಲು ಆಡಳಿತಾತ್ಮಕ ಅನುಮೋದನೆ ನೀಡಿ ಅನುದಾನ ಬಿಡುಗಡೆಗೊಳಿಸುವಂತೆ ಬಂದಿರುವ ಪ್ರಸ್ತಾವನೆಯನ್ನು ಗಮನಿಸಿದೆ.

ಮೇಲೆ ಓದಲಾದ -1ರ ಆರ್ಥಿಕ ಇಲಾಖೆಯ ಅನಧಿಕೃತ ಟಿಪ್ಪಣಿ ಸಂಖ್ಯೆ::ಆಇ/518/ವೆಚ್ಚ-6/2015 ದಿನಾಂಕ:1-10-2016ರಲ್ಲಿ ಆರ್ಥಿಕ ಇಲಾಖೆಯು 2016-17ನೇ ಸಾಲಿನ ಆಯವ್ಯಯ ಲೆಕ್ಕ ಶೀರ್ಷಿಕೆ:3054-80-196-1-03-300-(ಯೋಜನೆ) ಅಡಿ ಪೂರಕ ಅಂದಾಜು-2ರಲ್ಲಿ ಹೆಚ್ಚುವರಿ ಒದಗಿಸಲು ಆರ್ಥಿಕ ಇಲಾಖೆಯು ಸಹಮತಿ ನೀಡಿದ್ದು, ಈ ಹೆಚ್ಚುವರಿ ಅನುದಾನ ಪೂರಕ ಅಂದಾಜು -2 ವಿಧಾನ ಮಂಡಲದಲ್ಲಿ ಅನುಮೋದನೆಯಾದ ನಂತರ ಉದ್ದೇಶಿತ ಕಾಮಗಾರಿಗಳ ಪ್ರಗತಿ ಆಧರಿಸಿ ಹಂತ ಹಂತವಾಗಿ ಅನುದಾನ ಬಿಡುಗಡೆ ಮಾಡಲು ಆಡಳಿತ ಇಲಾಖೆಗೆ ತಿಳಿಸಿದೆ ಎಂದು ತಿಳಿಸಿರುತ್ತದೆ. ಹಾಗೂ ಮೇಲೆ ಓದಲಾದ-2 ರಲ್ಲಿ ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಟಿಪ್ಪಣಿ ಕಂಡಿಕೆ ಸಂ:8ರಲ್ಲಿ ನೀಡಿರುವ ಅನುಮೋದಿಸಿರುವ ಹಿನ್ನೆಲೆಯಲ್ಲಿ, ಮುಖ್ಯ ಮಂತ್ರಿ ಗ್ರಾಮೀಣ ರಸ್ತೆ ಅಭಿವೃದ್ಧಿ ಯೋಜನೆ ಲೆಕ್ಕ ಶೀರ್ಷಿಕೆ-3054-80-196-1-03-300(ಯೋಜನೆ) ಅಡಿ ಪ್ರಸ್ತಾವಿತ ಕೋಲಾರ ಜಿಲ್ಲೆ ಬಂಗಾರಪೇಟೆ ತಾಲ್ಲೂಕಿನ ವ್ಯಾಪ್ತಿಯ ರಸ್ತೆ ಅಭಿವೃದ್ಧಿ ಕಾಮಗಾರಿಗಳನ್ನು ಕೈಗೊಳ್ಳಲು ಆಡಳಿತಾತ್ಮಕ ಅನುಮೋದನೆ ನೀಡಲು ಸರ್ಕಾರವು ತೀರ್ಮಾನಿಸಿರುತ್ತದೆ.

ಆದ್ದರಿಂದ ಈ ಆದೇಶ.

**ಸರ್ಕಾರದ ಆದೇಶ ಸಂಖ್ಯೆ:ಗ್ರಾಅಪ:133:ಆರ್‌ಆರ್‌ಸಿ:2016 (ಭಾಗ -1)ಬೆಂಗಳೂರು, ದಿನಾಂಕ:28-10-2016.**

ಮೇಲಿನ ಪ್ರಸ್ತಾವನೆಯಲ್ಲಿ ವಿವರಿಸಿರುವಂತೆ ಕೋಲಾರ ಜಿಲ್ಲೆ ಬಂಗಾರಪೇಟೆ ತಾಲ್ಲೂಕಿನ ವ್ಯಾಪ್ತಿಯ ರಸ್ತೆ ಅಭಿವೃದ್ಧಿ ಕಾಮಗಾರಿಗಳಿಗೆ ಮುಖ್ಯ ಮಂತ್ರಿ ಗ್ರಾಮೀಣ ರಸ್ತೆ ಅಭಿವೃದ್ಧಿ ಯೋಜನೆ ಲೆಕ್ಕ ಶೀರ್ಷಿಕೆ-3054-80-196-1-03-300(ಯೋಜನೆ) ಅಡಿ **ರೂ.740.00ಲಕ್ಷ**ಗಳ (ರೂಪಾಯಿಗಳು ಏಳು ನೂರು ಲಕ್ಷಗಳು ಮಾತ್ರ) ಅನುದಾನದಲ್ಲಿ ಕೋಲಾರ ಜಿಲ್ಲೆ ಬಂಗಾರಪೇಟೆ ತಾಲ್ಲೂಕಿನ ವ್ಯಾಪ್ತಿಯ ಕೆಳಕಂಡ ಪ್ರಸ್ತಾವಿತ ರಸ್ತೆ ಅಭಿವೃದ್ಧಿ ಕಾಮಗಾರಿಗಳನ್ನು ಕೈಗೊಳ್ಳಲು ಷರತ್ತುಗಳಿಗೊಳಪಟ್ಟು ಆಡಳಿತಾತ್ಮಕ ಅನುಮೋದನೆ ನೀಡಲು ಸರ್ಕಾರವು ಹರ್ಷಿಸುತ್ತದೆ.

(ರೂ.ಲಕ್ಷಗಳಲ್ಲಿ)

| ಕ್ರ.ಸಂ | ಗ್ರಾಮ ಪಂಚಾಯಿತಿ | ಕಾಮಗಾರಿಯ ಹೆಸರು | ಅಂದಾಜು ಮೊತ್ತ |
|---|---|---|---|
| 1 | ಯಳೇಸಂದ್ರ | ಬೂದಿಕೋಟೆ ರಸ್ತೆಯಿಂದ ದಿನ್ನೇಕೊತ್ತೂರು ವಯಾ ಕೋಡಗುರ್ಕಿ ರಸ್ತೆಗೆ ಮರು ಡಾಂಬರೀಕರಣ ಕಾಮಗಾರಿ ಸರಪಳಿ-0.00 ಯಿಂದ 2.00 ಕಿ.ಮೀ | 8.00 |

| | | | |
|---|---|---|---|
| 2 | ಐನೋರಹೊಸಹಳ್ಳಿ | ಹುಣಸನಹಳ್ಳಿ ಗೇಟ್‌ನಿಂದ ಕಾರಮಂಗಲ ಗ್ರಾಮದವರೆಗೆ ಮರು ಡಾಂಬರೀಕರಣ ಸರಪಳಿ–0.00 ಯಿಂದ 7.00 ಕಿ.ಮೀ | 25.00 |
| 3 | ಎ.ಜ್ಯೋತೇನಹಳ್ಳಿ | ಬೂದಿಕೋಟೆ ರಸ್ತೆಯಿಂದ ಮಾಲೂರು ಗಡಿ ವಯಾ ಗಾಜಗ ಸಂಗನಹಳ್ಳಿ ರಸ್ತೆಗೆ ಮರು ಡಾಂಬರೀಕರಣ ಕಾಮಗಾರಿ ಸರಪಳಿ–0.00 ಯಿಂದ 5.00 ಕಿ.ಮೀ | 15.00 |
| 4 | ಹುಲಿಬೆಲೆ | ಟೇಕಲ್ ರಸ್ತೆಯಿಂದ ಮಾಲೂರು ಗಡಿ ಮಯಾ ಹುಲಿಬೆಲೆ ರಸ್ತೆಗೆ ಮರು ಡಾಂಬರೀಕರಣ ಕಾಮಗಾರಿ ಸರಪಳಿ–0.00 ಯಿಂದ 4.00 ಕಿ.ಮೀ | 15.00 |
| 5 | ಕಾಮಸಮುದ್ರ | ಕೆ.ಜಿ.ಎಫ್ ಕಾಮಸಮುದ್ರ ರಸ್ತೆಯಿಂದ ಅಂಬೇಡ್ಕರ್ ಕಾಲೋನಿ ಚಿಕ್ಕಯಳಚಮಂದೆ ರಸ್ತೆ ಅಭಿವೃದ್ಧಿ ಹಾಗೂ ಡಾಂಬರೀಕರಣ | 15.00 |
| 6 | ಕಾಮಸಮುದ್ರ | ಕೆ.ಜಿ.ಎಫ್ ರಸ್ತೆಯಿಂದ ಕಾಮಸಮುದ್ರ ತೊಪ್ಪನಹಳ್ಳಿ ರಸ್ತೆ ಮಾರ್ಗ ಬೋಡೇನಹಳ್ಳಿ ರಸ್ತೆಗೆ ಮರು ಡಾಂಬರೀಕರಣ ಕಾಮಗಾರಿ ಸರಪಳಿ–0.00 ಯಿಂದ 6.00 ಕಿ.ಮೀ | 20.00 |
| 7 | ದೊಡ್ಡವಲಗಮಾದಿ | ದೊಡ್ಡವಲಗಮಾದಿಯಿಂದ ಐಮಾಸಪುರ ರಸ್ತೆ ಅಭಿವೃದ್ಧಿ ಮತ್ತು ಡಾಂಬರೀಕರಣ ಕಾಮಗಾರಿ | 20.00 |
| 8 | ಚಿನ್ನಕೋಟೆ | ಬಂಗಾರಪೇಟೆ ಕೆ.ಜಿ.ಎಫ್ ರಸ್ತೆಯಿಂದ ಎಸ್.ಜಿ.ಕೋಟೆ ರಸ್ತೆಗೆ ಮರು ಡಾಂಬರೀಕರಣ ಕಾಮಗಾರಿ ಸರಪಳಿ–0.00 ಯಿಂದ 1.00 ಕಿ.ಮೀ | 8.00 |
| 9 | ಚಿನ್ನಕೋಟೆ | ಬಂಗಾರಪೇಟೆ ಕೆ.ಜಿ.ಎಫ್ ರಸ್ತೆಯಿಂದ ಚಿನ್ನಕೋಟೆ–ದೇವಗಾನಹಳ್ಳಿ ಅಜ್ಜಪನಹಳ್ಳಿ ರಸ್ತೆಗೆ ಮರು ಡಾಂಬರೀಕರಣ ಕಾಮಗಾರಿ ಸರಪಳಿ–0.00 ಯಿಂದ 3.00 ಕಿ.ಮೀ | 15.00 |
| 10 | ಚಿಕ್ಕಅಂಕಂಡಹಳ್ಳಿ | ಕೋಲಾರ ಬಂಗಾರಪೇಟೆ ಮುಖ್ಯ ರಸ್ತೆಯಿಂದ ಪಾಕರಹಳ್ಳಿ ರಸ್ತೆಗೆ ಮರು ಡಾಂಬರೀಕರಣ ಕಾಮಗಾರಿ ಸರಪಳಿ–0.00 ಯಿಂದ 1.00 ಕಿ.ಮೀ | 9.00 |
| 11 | ಕಾರಹಳ್ಳಿ | ಕೋಲಾರ ಬಂಗಾರಪೇಟೆ ರಸ್ತೆಯಿಂದ ಕಾರಹಳ್ಳಿ ರಸ್ತೆಗೆ ಮರು ಡಾಂಬರೀಕರಣ ಕಾಮಗಾರಿ ಸರಪಳಿ–0.00 ಯಿಂದ 1.00 ಕಿ.ಮೀ | 8.00 |
| 12 | ಕಾರಹಳ್ಳಿ | ಕಾರಹಳ್ಳಿಯಿಂದ ಬ್ಯಾಟರಾಯನಹಳ್ಳಿ ಮಾಯಾ ಕಾವರನಹಳ್ಳಿ ರಸ್ತೆಗೆ ಮರು ಡಾಂಬರೀಕರಣ ಕಾಮಗಾರಿ ಸರಪಳಿ–0.00 ಯಿಂದ 4.00 ಕಿ.ಮೀ | 15.00 |
| 13 | ಕೇತಗಾನಹಳ್ಳಿ | ಕಾಮಸಮುದ್ರ ರಸ್ತೆಯಿಂದ ಕೆ.ಜಿ.ಎಫ್ ವಯಾ ಬೋಯಿಸೊಣ್ಣೇನಹಳ್ಳಿ ರಸ್ತೆಗೆ ಮರು ಡಾಂಬರೀಕರಣ ಕಾಮಗಾರಿ ಸರಪಳಿ–0.00 ಯಿಂದ 5.00 ಕಿ.ಮೀ | 15.00 |
| 14 | ಯಳೇಸಂದ್ರ | ಬಲಮಂದೆ ರಸ್ತೆಯಿಂದ ಕೋಟರಾಮಗುಳ್ಳ ಗ್ರಾಮದ ಡಾಂಬರ್ ರಸ್ತೆ ಅಭಿವೃದ್ಧಿ ಕಾಮಗಾರಿ | 12.00 |
| 15 | ಗುಲ್ಲಹಳ್ಳಿ | ಬೂದಿಕೋಟೆಯಿಂದ ಗುಲ್ಲಹಳ್ಳಿ ರಸ್ತೆಗೆ ಮರು ಡಾಂಬರೀಕರಣ ಕಾಮಗಾರಿ ಸರಪಳಿ–0.00 ಯಿಂದ 11.00 ಕಿ.ಮೀ | 20.00 |
| 16 | ಘಟ್ಟಕಾಮದೇನಹಳ್ಳಿ | ಘಟ್ಟಕಾಮದೇನಹಳ್ಳಿಯಿಂದ ಕೆ.ಜಿ.ಎಫ್‌ವರೆಗೆ ವಯಾ ಪೆದ್ದಪಲ್ಲಿ ರಸ್ತೆಗೆ ಮರು ಡಾಂಬರೀಕರಣ ಕಾಮಗಾರಿ ಸರಪಳಿ–0.00 ಯಿಂದ 3.00 ಕಿ.ಮೀ | 25.00 |
| 17 | ಘಟ್ಟಕಾಮದೇನಹಳ್ಳಿ | ಕೆ.ಜಿ.ಎಫ್ ಬೇತಮಂಗಲ ರಸ್ತೆಯಿಂದ ಉರಿಗಾಂಪೇಟೆವರೆಗೆ ವಯಾ ಪಿಚ್ಚಹಳ್ಳಿ, ಯರ್ರನಾಗನಹಳ್ಳಿ ರಸ್ತೆಗೆ ಮರು ಡಾಂಬರೀಕರಣ ಕಾಮಗಾರಿ ಸರಪಳಿ–0.00 ಯಿಂದ 3.50 ಕಿ.ಮೀ | 22.00 |
| 18 | ದೋಣಿಮುಡಗು | ತೊಪ್ಪನಹಳ್ಳಿಯಿಂದ ಬಿಸಾನತ್ತಂ ರೈಲ್ವೆಸ್ಟೇಷನ್ ಮಾರ್ಗ ದೋಣಿಮುಡಗು ರಸ್ತೆಗೆ ಮರು ಡಾಂಬರೀಕರಣ ಕಾಮಗಾರಿ ಸರಪಳಿ–0.00 ಯಿಂದ 8.00 ಕಿ.ಮೀ | 25.00 |

| | | | |
|---|---|---|---|
| ಕೋಲಾರ ತಾಲ್ಲೂಕು ಬಂಗಾರಪೇಟೆ ವಿಧಾನಸಭಾ ಕ್ಷೇತ್ರ | | | |
| 67 | ಹುತ್ತೂರು ಹೋಬಳಿ | ಮಣಿಘಟ್ಟ ರಸ್ತೆಯಿಂದ ಪಾರೇಹೊಸಹಳ್ಳಿ ಗ್ರಾಮದವರೆಗೆ ರಸ್ತೆ ಅಭಿವೃದ್ಧಿ ಮತ್ತು ಡಾಂಬರೀಕರಣ | 20.00 |
| | | ಒಟ್ಟು | 740.00 |

ಷರತ್ತುಗಳು:

1. ಕೋಲಾರ ಜಿಲ್ಲೆ ಬಂಗಾರಪೇಟೆ ತಾಲ್ಲೂಕಿನ ವ್ಯಾಪ್ತಿಯ ಪ್ರಸ್ತಾವಿತ ರಸ್ತೆ ಅಭಿವೃದ್ಧಿ ಕಾಮಗಾರಿಗಳನ್ನು ತುರ್ತು ಹಾಗೂ ಅಗತ್ಯತೆ ಆಧಾರದ ಮೇರೆಗೆ ಹಂಚಿಕೆ ಮಿತಿಗೊಳಪಟ್ಟು ಪಂ.ರಾಜ್ ಇಂಜಿನಿಯರಿಂಗ್ ವಿಭಾಗದಿಂದ ಅನುಷ್ಠಾನಗೊಳಿಸತಕ್ಕದ್ದು.

2 ಮುಖ್ಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆರವರು ಎಲ್ಲಾ ಅನುಮೋದಿತ ಕಾಮಗಾರಿಗೆ ಸಂಬಂಧಿಸಿದಂತೆ ಅನುಷ್ಠಾನದ ಜವಾಬ್ದಾರಿಯನ್ನು ನಿರ್ವಹಿಸುವುದು ಹಾಗೂ ಕಾರ್ಯಪಾಲಕ ಅಭಿಯಂತರರಿಂದ ಪ್ರಗತಿಯ ವರದಿಯನ್ನು ಪಡೆದು ಸರ್ಕಾರಕ್ಕೆ ಕಾಲಕಾಲಕ್ಕೆ ನೀಡತಕ್ಕದ್ದು

3 ಈ ಆದೇಶದಲ್ಲಿ ಅನುಮೋದಿಸಿರುವ ಕಾಮಗಾರಿಯನ್ನು ಜಿಲ್ಲಾ ಪಂಚಾಯತಿ/ಕೆಆರ್‌ಐಡಿಎಲ್, ಇತರೆ ಯೋಜನೆಯಡಿ/ಕಾರ್ಯಕ್ರಮದಡಿ/ ಲೆಕ್ಕ ಶೀರ್ಷಿಕೆಯಡಿ ಯಾವುದೇ ಕಾರಣಕ್ಕೂ ಪುನರಾವರ್ತನೆ ಯಾಗಿರುವುದಿಲ್ಲವೆಂಬ ಅಂಶವನ್ನು ದೃಢಪಡಿಸಿಕೊಳ್ಳತಕ್ಕದ್ದು.

4 ಕರ್ನಾಟಕ ಪಾರದರ್ಶಕತೆ ನಿಯಮ 4 ಜಿ ವಿನಾಯಿತಿ ಇಲ್ಲದಿದ್ದಲ್ಲಿ ಕಾಮಗಾರಿಗಳನ್ನು ಕರ್ನಾಟಕ ಪಾರದರ್ಶಕತೆ ಕಾಯಿದೆ ಪ್ರಕಾರ ಟೆಂಡರ್ ಕರೆದು ನಿರ್ವಹಿಸುವುದು.

5 ಈ ಯೋಜನೆಯಡಿಯ ಎಲ್ಲಾ ಕಾಮಗಾರಿಗಳ ಬಳಕೆಯಾದ ಹಣ ಕುರಿತಂತೆ ಮಾಹಿತಿಯನ್ನು ಸರ್ಕಾರಕ್ಕೆ ಹಾಗೂ ಮುಖ್ಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆಗೆ ನೀಡುವುದು.

6 ಈ ಆದೇಶದಲ್ಲಿ ಅನುಮೋದಿಸಿರುವ ಕಾಮಗಾರಿಯ ಅಂದಾಜನ್ನು ನಿಯಮಾನುಸಾರ IRC ಮತ್ತಿತರೆ ತತ್ಸಮಾನು ತಾಂತ್ರಿಕ ನಿಬಂಧನೆಗಳಂತೆ ಪರಿಶೀಲನೆಗೆ ಒಳಪಡಿಸಿ ಸೂಕ್ತ ಪ್ರಾಧಿಕಾರದಿಂದ ಅನುಮೋದನೆ ಪಡೆಯತಕ್ಕದ್ದು.

7 ಕಾಮಗಾರಿ ಪ್ರಾರಂಭಿಸುವ ಮುನ್ನ ಮತ್ತು ಮುಕ್ತಾಯದ ನಂತರ ರಸ್ತೆಯ ಸನ್ನಿವೇಶದ ಛಾಯಾ ಚಿತ್ರಗಳನ್ನು ತೆಗೆದು ವೆಬ್‌ಸೈಟ್ ನಲ್ಲಿ ಅಳವಡಿಸತಕ್ಕದ್ದು.

8 ಪ್ರಸ್ತುತ ಈ ಶೀರ್ಷಿಕೆಯಡಿ ಜಿಲ್ಲಾ ಪಂಚಾಯತಿ ಅನುಷ್ಠಾನಗೊಳಿಸಿರುವ ಹೆಚ್ಚುವರಿ ರಸ್ತೆ ಕಾಮಗಾರಿಗಳನ್ನು Worksoft works monitoring ಪದ್ಧತಿ ಮುಖಾಂತರ ಉಸ್ತುವಾರಿ ಮಾಡಬೇಕಾಗಿದ್ದು, ಈ ಸಂಬಂಧ ಪೂರ್ಣ ಮಾಹಿತಿಯನ್ನು Worksoft website ನಲ್ಲಿ ತಪ್ಪದೇ ಅಳವಡಿಸತಕ್ಕದ್ದು.

9 ಕಾಮಗಾರಿಗಳ ಗುಣಮಟ್ಟ ಪರೀಕ್ಷೆಯನ್ನು ಕೆಆರ್‌ಆರ್‌ಡಿಎ ವತಿಯಿಂದ ನಿಗಧಿಪಡಿಸಿರುವ DQM/SQM ಗಳಿಂದ ಪರಿವೀಕ್ಷಣೆ ಮಾಡಿಸತಕ್ಕದ್ದು.

10 ಕಾಮಗಾರಿಗಳನ್ನು 3rd party /SQM/DQM ರವರಿಂದ ತಪಾಸಣೆಗೆ ಒಳಪಡಿಸತಕ್ಕದ್ದು.

11 2014-15ನೇ ಸಾಲಿನಿಂದ ಇಲಾಖೆಯಲ್ಲಿ ಅನುಷ್ಠಾನಗೊಳಿಸುತ್ತಿರುವ ಅನುಮೋದನೆಗೊಂಡ ಕ್ರಿಯಾ ಯೋಜನೆಯಲ್ಲಿರುವ ಎಲ್ಲಾ ಯೋಜನೆಗಳ ಎಲ್ಲಾ ಕಾಮಗಾರಿಗಳ ವಿವರಗಳನ್ನು ಗಾಂಧಿ ಸಾಕ್ಷಿ ಕಾಯಕ ತಂತ್ರಾಂಶದಲ್ಲಿ ಅಳವಡಿಸಿ, ಹಣ ಪಾವತಿಯನ್ನು ಗಾಂಧಿ ಸಾಕ್ಷಿ ಕಾಯಕ ತಂತ್ರಾಂಶದಿಂದ ಪಡೆಯಲಾದ ಪಾವತಿ ಆದೇಶವಿದ್ದಲ್ಲಿ ಮಾತ್ರ ಕಾಮಗಾರಿಗಳ ಬಿಲ್ಲುಗಳ ಪಾವತಿಯನ್ನು ಕಡ್ಡಾಯವಾಗಿ ಮಾಡುವಂತೆ ಹಾಗೂ ಸರ್ಕಾರದ ಸೂಚನೆಗಳನ್ನು ಕಟ್ಟುನಿಟ್ಟಾಗಿ ಪಾಲಿಸುವಂತೆ ಈಗಾಗಲೇ ಸೂಚಿಸಲಾಗಿದೆ. ಅದರಂತೆ, ಪ್ರಸ್ತುತ ಈ ಆದೇಶದಲ್ಲಿ ಅನುಮೋದಿಸಿರುವ ಕಾಮಗಾರಿಗಳನ್ನು ಗಾಂಧಿ ಸಾಕ್ಷಿ ಕಾಯಕ ತಂತ್ರಾಂಶದಲ್ಲಿ ಕಡ್ಡಾಯವಾಗಿ ಅಳವಡಿಸುವ ನಿಬಂಧನೆಗೊಳಪಡಿಸಿದೆ.

12 ಈ ಆದೇಶದಂತೆ ಜಿಲ್ಲಾ ಪಂಚಾಯತಿ/ಕೆಆರ್‌ಐಡಿಎಲ್ ಅನುಷ್ಠಾನಗೊಳಿಸಿದ ಕಾಮಗಾರಿಗಳಿಗೆ ತಾಲ್ಲೂಕುವಾರು ಭೌತಿಕ ಮತ್ತು ಆರ್ಥಿಕ ಪ್ರಗತಿ ವರದಿಯನ್ನು ಪ್ರತಿ ಮಾಹೆ ಮುಖ್ಯ ಇಂಜಿನಿಯರ್,

ಪಂ.ರಾಜ್ ಇಂಜಿನಿಯರಿಂಗ್ ಇಲಾಖೆ, ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯತಿ ರವರ ಮುಖಾಂತರ ಸರ್ಕಾರಕ್ಕೆ ನೀಡುವುದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಬೂದಿನಹಳ್ಳಿ ನಾಗರಾಜ್)
ನಿರ್ದೇಶಕರು
ಸುವರ್ಣ ಗ್ರಾಮೋದಯ ಯೋಜನೆ ಹಾಗೂ
ಪದನಿಮಿತ್ತ ಸರ್ಕಾರದ ಉಪ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.

**ಪ್ರತಿಯನ್ನು:**

1. ಮಹಾಲೇಖಪಾಲರು (ಲೆಕ್ಕಪತ್ರ), ಕರ್ನಾಟಕ, ಬೆಂಗಳೂರು.
2. ಮಹಾಲೇಖಪಾಲರು (ಆಡಿಟ್-1), ಕರ್ನಾಟಕ, ಬೆಂಗಳೂರು.
3. ಮಹಾಲೇಖಪಾಲರು (ಆಡಿಟ್-2), ಕರ್ನಾಟಕ, ಬೆಂಗಳೂರು.
4. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಧಾನ ಸೌಧ, ಬೆಂಗಳೂರು.
5. ಅಪರ ಮುಖ್ಯ ಕಾರ್ಯದರ್ಶಿಗಳು ಹಾಗೂ ಅಭಿವೃದ್ಧಿ ಆಯುಕ್ತರು, ವಿಧಾನ ಸೌಧ, ಬೆಂಗಳೂರು
6. ಪ್ರಧಾನ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ ಇವರ ಆಪ್ತ ಕಾರ್ಯದರ್ಶಿಗಳು, ವಿಧಾನ ಸೌಧ, ಬೆಂಗಳೂರು
7. ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ (PMU)(IF),5ನೇ ಹಂತ, ಬಹುಮಹಡಿ ಕಟ್ಟಡ, ಬೆಂಗಳೂರು
8. ಪ್ರಧಾನ ಕಾರ್ಯದರ್ಶಿಗಳು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಬೆಂಗಳೂರು.
9. ಪ್ರಧಾನ ಕಾರ್ಯದರ್ಶಿಗಳು(ಪಂರಾಜ್), ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ಇಲಾಖೆ, ಬೆಂಗಳೂರು.
10. ವಿಶೇಷಾಧಿಕಾರಿಗಳು (ಜಿಪಂ) ಮತ್ತು ಪದನಿಮಿತ್ತ ಸರ್ಕಾರದ ಉಪ ಕಾರ್ಯದರ್ಶಿ, ಆರ್ಥಿಕ ಇಲಾಖೆ ವಿಧಾನ ಸೌಧ, ಬೆಂಗಳೂರು
11. ಆಂತರಿಕ ಆರ್ಥಿಕ ಸಲಹೆಗಾರರು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಬೆಂಗಳೂರು.
12. ನಿರ್ದೇಶಕರು, ಖಜಾನೆ ಇಲಾಖೆ, ಬೆಂಗಳೂರು.
14. ಉಪ ನಿರ್ದೇಶಕರು, ನೆಟ್‌ವರ್ಕ್ ಮ್ಯಾನೇಜ್‌ಮೆಂಟ್ ಸೆಂಟರ್, ಟ್ರೆಜರಿ ಡಿಪಾರ್ಟ್‌ಮೆಂಟ್, ಖನಿಜ ಭವನ, ರೇಸ್‌ಕೋರ್ಸ್ ರಸ್ತೆ, ಬೆಂಗಳೂರು.
15. ಜಿಲ್ಲಾ ಖಜಾನಾಧಿಕಾರಿಗಳು, ಕೋಲಾರ ಜಿಲ್ಲೆ.
16. ಅಧೀನ ಕಾರ್ಯದರ್ಶಿಗಳು (ವೆಚ್ಚ-6), ಜಿ.ಪಂ. ಆರ್ಥಿಕ ಇಲಾಖೆ, ವಿಧಾನಸೌಧ, ಬೆಂಗಳೂರು.
17. ಮುಖ್ಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆ, ಬೆಂಗಳೂರು-9
18. ವ್ಯವಸ್ಥಾಪಕ ನಿರ್ದೇಶಕರು, ಕೆ.ಆರ್.ಐ.ಡಿ.ಎಲ್. ಬೆಂಗಳೂರು.
19. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯತ್, ಕೋಲಾರ
20. ಅಧೀಕ್ಷಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ವೃತ್ತ, ಬೆಂಗಳೂರು
21. ಕಾರ್ಯಪಾಲಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗ, ಕೋಲಾರ.
22. ಮಾಹಿತಿ ಕೇಂದ್ರದ ಗಣಕ ಕೋಶ ಮುಖ್ಯಸ್ಥರು, ಗ್ರಾಅಪಂರಾ ಇಲಾಖೆ ಇವರಿಗೆ ಇಲಾಖೆಯ ಅಂತರ್ಜಾಲದಲ್ಲಿ ಅಳವಡಿಸಲು ಹಾಗೂ ಗ್ರೂಪ್ ಮೈಲ್ ನಲ್ಲಿ ರವಾನಿಸಲು ಸೂಚಿಸಿದೆ
23. ರಕ್ಷಾ ಕಡತ / ಹೆಚ್ಚುವರಿ ಪ್ರತಿ.